ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com



ಬೆಂಗಳೂರು: ಶ್ರೀ ರಾಮನವಮಿ, ಹನುಮ ಜಯಂತಿ ಹಾಗೂ ಶ್ರೀ ಶಿವಕುಮಾರ ಸ್ವಾಮೀಜಿ ಅವರ ಜನ್ಮದಿನದ ಅಂಗವಾಗಿ ವಾತ್ಸಲ್ಯ ಚರಿತ್ರೆ ಟ್ರಸ್ಟ್ ಹಾಗೂ ಜನಸೇವಾ ಮತ್ತು ಕಟ್ಟಡ ಕೂಲಿ ಕಾರ್ಮಿಕರ ಸಂಘದ ವತಿಯಿಂದ ಮಾಗಡಿ ರಸ್ತೆ ಹೆರೋಹಳ್ಳಿಯಲ್ಲಿ ಭಕ್ತರಿಗೆ ಪಾನಕ, ಮಜ್ಜಿಗೆ ಮತ್ತು ಕೋಸಂಬರಿ ವಿತರಣೆ ಕಾರ್ಯಕ್ರಮವನ್ನು ಆಯೋಜಿಸಲಾಯಿತು. ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ನಟ-ನಿರ್ಮಾಪಕರಾದ ಗಂಡಸಿ ಸದಾನಂದ ಸ್ವಾಮಿ ಭಾಗವಹಿಸಿ, ಸೇವಾ ಕಾರ್ಯಗಳನ್ನು ಮೆಚ್ಚಿ ಮಾತನಾಡಿದರು. ಸಮಾಜ ಸೇವೆ ಮತ್ತು ಧಾರ್ಮಿಕ ಆಚರಣೆಗಳ ಮೂಲಕ ಜನರಲ್ಲಿ ಒಗ್ಗಟ್ಟು ಬೆಳೆಸುವ ಇಂತಹ ಕಾರ್ಯಕ್ರಮಗಳು ಶ್ಲಾಘನೀಯ ಎಂದು ಹೇಳಿದರು. ಈ ಸಂದರ್ಭದಲ್ಲಿ ಪುಷ್ಪ ಶೆಟ್ಟಿ, ದೊಡ್ಡನ್ನಮ್ಮಯ, ಚರಣ್ ಶ್ರೀಧರ್, ಕೃಷ್ಣಕಾಂತ, ಕಿರಣ್, ರಕ್ಷಿತ್, ಕೋಮಲ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು. ಕಾರ್ಯಕ್ರಮದಲ್ಲಿ ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರಸಾದವನ್ನು ಸ್ವೀಕರಿಸಿದರು.

# CISCE–SGFI ರಾಷ್ಟ್ರೀಯ ಕ್ರೀಡಾಕೂಟ 2025 ವೈಭವೋಪೇತವಾಗಿ ಆಯೋಜನೆ

ತುಮಕೂರು

ಭಾರತೀಯ ಶಾಲಾ ಕ್ರೀಡಾ ಒಕ್ಕೂಟ (SGFI) ದೊಂದಿಗೆ ಸಂಯೋಜಿತವಾಗಿರುವ ನವದೆಹಲಿಯ ಭಾರತೀಯ ಶಾಲಾ ಪ್ರಮಾಣಪತ್ರ ಪರೀಕ್ಷಾ ಮಂಡಳಿ (CISCE) ಆಯೋಜಿಸಿದ "CISCE ಕ್ರೀಡಾಕೂಟ ಮತ್ತು ಕ್ರೀಡೆ –2025" ಎಂಬ ಪ್ರತಿಷ್ಠಿತ ರಾಷ್ಟ್ರೀಯ ಮಟ್ಟದ ಕ್ರೀಡಾಸ್ಪರ್ಧೆಯನ್ನು, ಸೆಪ್ಟಂಬರ್ 16 ರಿಂದ 18, 2025 ರ ವರೆಗೆ ತುಮಕೂರು ಜಿಲ್ಲೆಯ ತುರುವೇಕೆರೆ ತಾಲ್ಲೂಕಿನ ಇಂಡಿಯನ್ ಪಬ್ಲಿಕ್ ಸ್ಕೂಲ್– ಕೆಎ 324 ಮತ್ತು ಬೆಂಗಳೂರಿನ ಯಲಹಂಕ ತಾಲ್ಲೂಕು, ಬೆಟ್ಟಹಲಸುರ ಜಾಲ ಹೋಬಳಿ, ಸಮೀಕ್ಷೆ ಸಂಖ್ಯೆ 336 ರಲ್ಲಿ ಸ್ಥಾಪಿತವಾಗಿರುವ ಪಡುಕೋಣೆ ದ್ರಾವಿಡ್ ಸೆಂಟರ್ ಫಾರ್ ಸ್ಪೋರ್ಟ್ಸ್ ಎಕ್ಸಲೆನ್ಸ್ ಪ್ರೈ. ಲಿಮಿಟೆಡ್ ಎಂಬ ಅಂತರಾಷ್ಟ್ರೀಯ ಮಟ್ಟದ ಕ್ರೀಡಾಂಗಣದಲ್ಲಿ ಅತ್ಯಂತ ವೈಭವೋಪೇತವಾಗಿ ಆಯೋಜಿಸಲಾಗಿತ್ತು.

ಈ ರಾಷ್ಟ್ರೀಯ ಮಟ್ಟದ ಸ್ಪರ್ಧೆಯಲ್ಲಿ, ಭಾರತ ದೇಶದ ಎಲ್ಲಾ ರಾಜ್ಯಗಳಿಂದ ಪ್ರಾದೇಶಿಕ ಕರಾಟೆ ಪಂದ್ಯಾವಳಿಯಲ್ಲಿ ಆಯ್ಕೆಯಾಗಿದ್ದ ವಿದ್ಯಾರ್ಥಿ ವಿದ್ಯಾರ್ಥಿನಿಯರು




ಭಾಗವಹಿಸಿದ್ದರು, ಅಲ್ಲಿ ನಡೆದ 17 ವರ್ಷದೊಳಗಿನವರ ವಿಭಾಗದ ಕರಾಟೆ ಚಾಂಪಿಯನ್‌ಶಿಪ್‌ನಲ್ಲಿ ನಮ್ಮ ಬೆಂಗಳೂರು ನಗರದ ಕತ್ರಿಗುಪ್ಪೆಯಲ್ಲಿರುವ ಶ್ರೀ ಕೃಷ್ಣ ಅಂತರಾಷ್ಟ್ರೀಯ ಶಾಲೆಯ ಪ್ರತಿಭಾವಂತ ವಿದ್ಯಾರ್ಥಿ ಶ್ರವಂತ್ ಜಿ.ಆರ್. ಅವರು ತಮ್ಮ ಅಸಾಧಾರಣ ಸಾಮರ್ಥ್ಯ, ಪರಿಶ್ರಮ ಹಾಗೂ ಕ್ರೀಡಾತ್ಮಕತೆಯನ್ನು ತೋರಿಸಿ ತೀವ್ರ ಸ್ಪರ್ಧೆಯ ನಡುವೆ ಕಂಚಿನ ಪದಕವನ್ನು ಗೆದ್ದು ಕರ್ನಾಟಕ ರಾಜ್ಯದ ಕೀರ್ತಿಯನ್ನು ಹೆಚ್ಚಿಸಿರುವುದು ಮಾತ್ರವಲ್ಲದೆ, ಕೃಷ್ಣ ಶಾಲೆಯ ಹೆಗ್ಗಳಿಕೆಯನ್ನು ಹೆಚ್ಚಿಸಿದ್ದಾನೆ.

ಕರ್ನಾಟಕವನ್ನು ಪ್ರತಿನಿಧಿಸಿ ಜಯ ಸಾಧಿಸಿದ ಶ್ರವಂತ್ ಜಿ.ಆರ್. ಅವರ ಸಾಧನೆ ರಾಜ್ಯದ ಇತರ ಯುವ ಕ್ರೀಡಾಪಟುಗಳಿಗೆ ಸ್ಫೂರ್ತಿದಾಯಕವಾಗಿದೆ. ಸಿ ಐ ಎಸ್ ಸಿ ಇ ಶಾಲೆಯಲ್ಲಿ ಓದುವ ಮಕ್ಕಳಿಗೂ ಕೂಡ ಕ್ರೀಡಾತ್ಮಕ ಮನೋಭಾವ ಇದೆ ಎಂಬುದನ್ನು ಸಾಬೀತುಪಡಿಸಿದ್ದಾರೆ. ಹತ್ತನೇ ತರಗತಿಯಲ್ಲಿ ಓದುತ್ತಿರುವ ಶ್ರವಂತ್ ಓದಿನ ಒತ್ತಡದಲ್ಲಿಯೂ ತನ್ನ ಸಾಧನೆಯನ್ನು ಮೆಟ್ಟಿ ನಿಂತಿದ್ದಾನೆ. ಸಾಧನೆ ಇವನ ದಿನನಿತ್ಯದ ಚಟುವಟಿಕೆಯಾಗಿದೆ. ಕೃಷ್ಣ ಶಾಲೆಯಲ್ಲಿ ಓದುವ ಸಾವಿರಾರು ವಿದ್ಯಾರ್ಥಿಗಳಿಗೆ ಇವನೊಬ್ಬ 'ರಿಯಲ್ ಹೀರೋ' ಇವನು ಮೆಡಲ್ ಹಿಡಿದು ವೇದಿಕೆಯ ಮೇಲೆ ಬಂದರೆ ಚಪ್ಪಾಳೆಗಳ ಸುರಿಮಳೆ ಸುರಿಯುತ್ತವೆ. ಕೇವಲ ಆಟವಷ್ಟೇ ಅಲ್ಲದೆ ಪಾಠಗಳಲ್ಲಿಯೂ ತನ್ನ ಛಾಪು ಮೂಡಿಸಿದ್ದಾನೆ. ಶಿಕ್ಷಕರಿಗೆ ಇವನೊಬ್ಬ ಅಚ್ಚುಮೆಚ್ಚಿನ ವಿದ್ಯಾರ್ಥಿ. ಆಟ, ಪಾಠ ,ಸಂಸ್ಕೃತಿ ಎಲ್ಲದರಲ್ಲಿಯೂ ಇವನದು ಮೇಲುಗೈ. ಹೀಗೆ ಇವನ ಸಾಧನೆ ಜಗತ್ತಿನಾದ್ಯಂತ ಪಸರಿಸಲಿ ಎಂದು ನಾವೆಲ್ಲರೂ ಹಾರೈಸುತ್ತೇವೆ.

ಈ ರಾಷ್ಟ್ರೀಯ ಮಟ್ಟದ ಕ್ರೀಡಾ ಸ್ಪರ್ಧೆಯಲ್ಲಿ ಸಿ ಐ ಎಸ್ ಸಿ ಇ ಮುಖ್ಯ ಕಾರ್ಯನಿರ್ವಾಹಕ ಹಾಗೂ ಕಾರ್ಯದರ್ಶಿ ಡಾ. ಜೋಸೆಫ್ ಇಮ್ಯಾನುಯೆಲ್ ಮತ್ತು ಸಿ ಐ ಎಸ್ ಸಿ ಇ ಅಧ್ಯಕ್ಷರಾದ ಡಾ. ಜಿ. ಇಮ್ಯಾನುಯೆಲ್ ಅವರು, ಡಾ.ರುದ್ರಯ್ಯ ಎಂ ಹಿರೇಮಠ, ಪ್ರಾಂಶುಪಾಲರು, ಇಂಡಿಯನ್ ಪಬ್ಲಿಕ್ ಸ್ಕೂಲ್ ಅವರು ತಮ್ಮ ಅಮೂಲ್ಯ ಹಾಜರಾತಿಯಿಂದ ಕ್ರೀಡಾಕೂಟಕ್ಕೆ ಗೌರವ ಹೆಚ್ಚಿಸಿದರು.

## ದಾವಣಗೆರೆ ದಕ್ಷಿಣ, ಬಾಗಲಕೋಟೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ದೊಡ್ಡ ಅಂತರದ ಗೆಲುವು

ಬಾಗಲಕೋಟೆ

"ಹಿರಿಯ ನಾಯಕರ ಕೆಲಸ, ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳಿಂದಾಗಿ ದಾವಣಗೆರೆ ದಕ್ಷಿಣ ಹಾಗೂ ಬಾಗಲಕೋಟೆ ಉಪಚುನಾವಣೆಯಲ್ಲಿ ಮತದಾರರು ಕಾಂಗ್ರೆಸ್ ಅಭ್ಯರ್ಥಿಗಳಿಗೆ ಮತ ಹಾಕಿ ಹೆಚ್ಚಿನ ಅಂತರದ ಗೆಲುವು ನೀಡಲಿದ್ದಾರೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ವಿಶ್ವಾಸ ವ್ಯಕ್ತಪಡಿಸಿದರು.

ಬಾಗಲಕೋಟೆಯಲ್ಲಿ ಬುಧವಾರ ನಡೆದ ಮಾಧ್ಯಮಗೋಷ್ಠಿಯಲ್ಲಿ ಶಿವಕುಮಾರ್ ಅವರು ಮಾತನಾಡಿದರು.

"ಹೆಚ್.ವೈ ಮೇಟಿ ಅವರು ಕೊಟ್ಟ ಮಾತಿನಂತೆ ನಡೆದಿದ್ದಾರೆ. ಈ ಭಾಗಕ್ಕೆ ಸರ್ಕಾರಿ ಮೆಡಿಕಲ್ ಕಾಲೇಜು ನೀಡಲಾಗಿದೆ. ಪ್ರಣಾಳಿಕೆಯಲ್ಲಿ ಭರವಸೆ ನೀಡದಿದ್ದರೂ ನಮ್ಮ ಸರ್ಕಾರ ಯುಕೆಪಿ 3ನೇ ಹಂತದ ಯೋಜನೆಯಲ್ಲಿ ಭೂ ಸಂತ್ರಸ್ತರಾಗಿರುವ ಗ್ರಾಮೀಣ ಭಾಗದ ರೈತರಿಗೆ ಪರಿಹಾರ ವಿತರಣೆ ಮಾಡಿದ್ದೇವೆ. ಬೊಮ್ಮಾಯಿ ಅವರ ಸರ್ಕಾರ ಇದನ್ನು ನೀಡಲು ವಿಫಲವಾಗಿದ್ದರೂ ನಾವು ನೀಡಿದ್ದೇವೆ. ಆಲಮಟ್ಟಿ ಅಣೆಕಟ್ಟು ಎತ್ತರ ವಿಚಾರವಾಗಿ ಸದನದಲ್ಲಿ ನಿರ್ಣಯ ಮಂಡಿಸಿದ್ದು, ಈ ಯೋಜನೆ ಜಾರಿಗೆ ನಮ್ಮ ಬದ್ಧತೆ ತೋರಿದ್ದೇವೆ" ಎಂದು ತಿಳಿಸಿದರು.

"ನಮ್ಮ ಕಾರ್ಯಕರ್ತರು ಮನೆ ಮನೆಗೆ ಹೋಗಿ ಗ್ಯಾರಂಟಿ ಯೋಜನೆಗಳು ತಲುಪುತ್ತಿದೆಯೇ ಇಲ್ಲವೇ ಎಂದು ಮನೆ ಮನೆಗೆ ಹೋಗಿ ಪರೀಕ್ಷೆ ಮಾಡುತ್ತಿದ್ದಾರೆ. ವಿರೋಧ ಪಕ್ಷದವರು ಇದನ್ನು ಟೀಕೆ ಮಾಡುತ್ತಿದ್ದಾರೆ. ಆದರೆ ಈ ಯೋಜನೆ ಫಲಾನುಭವಿಗಳು ನಾವು ಈ ಹಿಂದೆ ಬಿಜೆಪಿಗೆ ಮತ ಹಾಕಿದ್ದಾಗ ನಮಗೆ ಯಾವುದೇ ನೆರವಾಗಿರಲಿಲ್ಲ. ಆದರೆ ಮುಂದೆ ನಿಮ್ಮ ಋಣ ತೀರಿಸುತ್ತೇವೆ ಎಂದು ಉಪಕಾರ ಸ್ಮರಣೆ ಮಾಡುತ್ತಿದ್ದಾರೆ. ಇದು ನಮಗೆ ಸಂತೋಷದ ವಿಚಾರ. ದಾವಣಗೆರೆಯಾಗಲಿ, ಬಾಗಲಕೋಟೆಯಾಗಲಿ ನಗರ ಪ್ರದೇಶಗಳಲ್ಲಿ ಜನ ನಮಗೆ ಬೆಂಬಲ ವ್ಯಕ್ತಪಡಿಸುತ್ತಿದ್ದಾರೆ. ಇದಕ್ಕೆ ನಮ್ಮ ಕಾರ್ಯಕರ್ತರಿಗೆ ಅಭಿನಂದಿಸುತ್ತೇನೆ" ಎಂದರು.

ಕರ್ನಾಟಕಕ್ಕೆ ಅನ್ಯಾಯ, ಬೆಲೆ ಏರಿಕೆ ಮಾಡುತ್ತಿರುವ ಬಿಜೆಪಿಗೆ ಜನರಿಂದ ತಕ್ಕ ಪಾಠ

ಕೇಂದ್ರ ಸರ್ಕಾರ ಕಷ್ಟ ಕಾಲದಲ್ಲಿ ಜನರ ನೆರವಿಗೆ ನಿಲ್ಲಬೇಕಾಗಿತ್ತು. ನಮ್ಮ ಸರ್ಕಾರ ಬೆಲೆ ಏರಿಕೆಯಿಂದ ಜನಸಾಮಾನ್ಯರಿಗೆ ಆಗುತ್ತಿರುವ ಆರ್ಥಿಕ ಹೊರೆ ಇಳಿಸಲು ಗ್ಯಾರಂಟಿ ಯೋಜನೆಯನ್ನು ಜಾರಿಗೆ ತಂದಿತು. ಇದರಿಂದ ಪ್ರತಿ ತಿಂಗಳು ಬಡ ಹಾಗೂ ಮಧ್ಯಮವರ್ಗದ ಕುಟುಂಬದವರಿಗೆ 4–5 ಸಾವಿರ ಹಣ ಉಳಿತಾಯವಾಗುವಂತೆ ಮಾಡಿದೆವು.

ಕೇಂದ್ರ ಸರ್ಕಾರ 15ನೇ ಹಣಕಾಸು ಆಯೋಗದಲ್ಲಿ ಕರ್ನಾಟಕಕ್ಕೆ ನೀಡಬೇಕಾಗಿದ್ದ 15,583 ಕೋಟಿ ರೂಪಾಯಿಯನ್ನು ನೀಡದಿರುವ ಬಗ್ಗೆ ಪತ್ರಿಕೆಗಳು ವರದಿ ಮಾಡಿವೆ. ಇನ್ನು ಇವತ್ತಿನಿಂದ ಎಲ್ಲಾ ಅಗತ್ಯ ವಸ್ತುಗಳ ಬೆಲೆ ಏರಿಕೆಯಾಗುತ್ತಿದೆ. ಕೇವಲ ಪೆಟ್ರೋಲ್, ಡೀಸೆಲ್, ಗ್ಯಾಸ್ ಮಾತ್ರವಲ್ಲ ಎಲ್ಲಾ ವಸ್ತುಗಳ ಬೆಲೆ ಹೆಚ್ಚಾಗಿದ್ದು ಮನೆ ಕಟ್ಟುವುದು ಕಷ್ಟವಾಗಿದೆ. ಗ್ಯಾಸ್ ಬದಲಾಗಿ ಸೀಮೆಎಣ್ಣೆ ಬಳಸುವ ಪರಿಸ್ಥಿತಿ ಬಂದಿದೆ. ಕೇಂದ್ರ ಸರ್ಕಾರದ ಭರವಸೆ ಕೊಟ್ಟಿದ್ದ ಅಚ್ಛೇದಿನ ಹೋಗಿ, ಸೌದೆ ಭಾಗ್ಯ ಬಂದಿದೆ. ಕೇಂದ್ರ ಸರ್ಕಾರ ಹೇಳಿದ್ದ 15 ಲಕ್ಷ ಕೂಡ ಬ್ಯಾಂಕ್ ಖಾತೆಗಳಿಗೆ ಬರಲಿಲ್ಲ. ಇದೆಲ್ಲದರ ಬಗ್ಗೆ ನಾವು ಬಿಜೆಪಿಯನ್ನು ಪ್ರಶ್ನಿಸಬೇಕು. ಈ ಚುನಾವಣೆಯಲ್ಲಿ ಜನರು ಅತಿ ಹೆಚ್ಚು ಅಂತರದಿಂದ ಕಾಂಗ್ರೆಸ್ ಅಭ್ಯರ್ಥಿ ಉಮೇಶ್ ಮೇಟಿ ಅವರನ್ನು ಗೆಲ್ಲಿಸುತ್ತಾರೆ ಎಂಬ ವಿಶ್ವಾಸ ನಮಗಿದೆ. ಎಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡುತ್ತಿದ್ದಾರೆ.

"ಬೆಲೆ ಏರಿಕೆ ಮೂಲಕ ಜನರನ್ನು ಸಂಕಷ್ಟಕ್ಕೆ ದೂಡಿರುವ ಬಿಜೆಪಿಯವರಿಗೆ ಜನರು ತಕ್ಕ ಪಾಠ ಕಲಿಸಬೇಕು. ಹಿರಿಯ ನಾಯಕನ ಬೇಡಿಕೆಗಳನ್ನು ನಾವು ಈಡೇರಿಸಿ, ಮತದಾರರ ಋಣ ತೀರಿಸುವ ಕೆಲಸ ಮಾಡಿದ್ದೇವೆ. ಎರಡೂ ಕ್ಷೇತ್ರಗಳ ಜನ ಇಡೀ ರಾಜ್ಯಕ್ಕೆ ದೊಡ್ಡ ಸಂದೇಶ ರವಾನೆ ಮಾಡಲಿದ್ದಾರೆ.

ಹೊರಗಡೆಯಿಂದ ಬಂದಿರುವ ವಿದ್ಯಾರ್ಥಿಗಳಿಗೆ ಮತ ಹಾಕುವಂತೆ ಬಿಜೆಪಿ ಬೆದರಿಕೆ

"ಚುನಾವಣೆ ಹಿನ್ನೆಲೆಯಲ್ಲಿ ಕೆಲವರು ತಮ್ಮ ಬದುಕಿಗಾಗಿ ವಲಸೆ ಹೋಗಿದ್ದಾರೆ. ಅವರನ್ನು ನಾವು ವಾಪಸ್ ಕರೆ ತರುವ ಕೆಲಸ ಮಾಡಬೇಕಾಗಿದೆ. ಈ ಮಧ್ಯೆ ಬಾಗಲಕೋಟೆ ನಗರದ ಕೆಲವು ವಾರ್ಡ್ ಗಳಲ್ಲಿ ಹೊರಗಡೆಯಿಂದ ಬಂದಿರುವ ವಿದ್ಯಾರ್ಥಿಗಳಿದ್ದು, ಅವರ ಹೆಸರನ್ನು ಮತದಾರರ ಪಟ್ಟಿಯಲ್ಲಿ ಸೇರಿಸಲಾಗಿದೆ. ಅವರ ಊರಿನಲ್ಲೂ ಮತ ಇದೆ, ಇಲ್ಲೂ ಮತ ಇವೆ. ನಮ್ಮ ಅಭ್ಯರ್ಥಿ ಇಂತಹವರ ಮತದಾರರ ಗುರುತಿನ ಚೀಟಿ ಕಸಿದಿಟ್ಟುಕೊಂಡಿದ್ದಾರೆ. ಈ ವಿದ್ಯಾರ್ಥಿಗಳಿಗೆ ಮತಹಾಕಬೇಕು, ಇಲ್ಲದಿದ್ದರೆ ಫೇಲ್ ಮಾಡುತ್ತೇವೆ, ತೊಂದರೆ ಮಾಡುವುದಾಗಿ ಬೆದರಿಕೆ ಹಾಕುತ್ತಿದ್ದಾರೆ. ಈ ವಿಚಾರವಾಗಿ ಜಿಲ್ಲಾಧಿಕಾರಿಗಳಿಗೆ ದೂರು ನೀಡುವಂತೆ ಸೂಚಿಸಿದ್ದೇನೆ. ಎರಡು ಮತಗಳಿರುವವರನ್ನು ಪತ್ತೆ ಹಚ್ಚಲು ಒಂದು ತಂಡವನ್ನೇ ಮೀಸಲಿಟ್ಟಿದ್ದೇವೆ. ಇಂತಹವರನ್ನು ಬಂಧಿಸಲು ಅಕಾಶವಿದೆಯೇ ಎಂದು ಪರಿಶೀಲಿಸುತ್ತಿದ್ದು, ಆದಷ್ಟು ಬೇಗ ಇದರ ವಿರುದ್ಧ ಕ್ರಮ ವಹಿಸಲಾಗುವುದು" ಎಂದು ತಿಳಿಸಿದರು.

ಪಕ್ಷ ತೀರ್ಮಾನ ಒಪ್ಪುತ್ತೇವೆ: "ಸರ್ಕಾರ ಚೆನ್ನಾಗಿ ಕೆಲಸ ಮಾಡುತ್ತಿದ್ದೆ ಅದರಲ್ಲಿ ತಪ್ಪೇನಿದೆ. ಪಕ್ಷದ ತೀರ್ಮಾನವನ್ನು ನಾವಿಬ್ಬರೂ ಒಪ್ಪುವುದಾಗಿ ಹೇಳಿದ್ದೇವೆ. ಪಕ್ಷ ಹೇಳಿದನ್ನು ಅವರು ಒಪ್ಪುತ್ತಾರೆ, ನಾನು ಒಪ್ಪಿಕೊಳ್ಳುವೆ ಎಲ್ಲರೂ ಒಪ್ಪಿಕೊಳ್ಳುತ್ತಾರೆ" ಎಂದು ತಿಳಿಸಿದರು.

# ನಕ್ಸಲ್ ಮುಕ್ತಗೊಳಿಸುವ ಹಂತದಲ್ಲಿದ್ದೇವೆ: ಇದು ಕೇಂದ್ರದ ಸಾಧನೆ

ಬೆಂಗಳೂರು

ನಕ್ಸಲಿಸಂ ಅನ್ನು ಕೇವಲ ಬಡತನದ ಪರಿಣಾಮವೆಂದು ನೋಡುವ ವಾದವು ಹಲವು ವರ್ಷಗಳಿಂದ ಮುಂದುವರಿದಿತ್ತು. ಆದರೆ ಇತ್ತೀಚಿನ ವರ್ಷಗಳಲ್ಲಿ ಕೇಂದ್ರ ಸರ್ಕಾರ ತೆಗೆದುಕೊಂಡಿರುವ ಕ್ರಮಗಳು, ಅದು ಕೇವಲ ಆರ್ಥಿಕ ಹಿನ್ನಡೆಯ ಸಮಸ್ಯೆಯಲ್ಲ; ಒಂದು ಸಿದ್ಧಾಂತ ಮತ್ತು ಶಸ್ತ್ರಸಜ್ಜಿತ ರಾಜಕೀಯದ ಸಮಸ್ಯೆಯೂ ಆಗಿತ್ತು ಎಂಬ ವಾದಕ್ಕೆ ಬಲ ನೀಡಿವೆ.

ಲೋಕಸಭೆಯಲ್ಲಿ ಎಡಪಂಥೀಯ ಉಗ್ರಗಾಮಿತ್ವದ ಕುರಿತು ನಡೆದ ಚರ್ಚೆಯ ವೇಳೆ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು 2026ರ ಮಾರ್ಚ್ 31ರೊಳಗೆ ಭಾರತವನ್ನು ನಕ್ಸಲ್ ಮುಕ್ತಗೊಳಿಸುವ ಗುರಿ ಸಾಧನೆಯ ಹಂತದಲ್ಲಿದೆ ಎಂದು ಹೇಳಿದ್ದಾರೆ. 2025ರಲ್ಲಿಯೇ ಅವರು ಈ ಗಡುವನ್ನು ಘೋಷಿಸಿದ್ದರು.

ಒಂದು ಕಾಲದಲ್ಲಿ "ರೆಡ್ ಕಾರಿಡಾರ್" ಎಂದು ಕರೆಯಲ್ಪಟ್ಟ ಪ್ರದೇಶಗಳು ಆಂಧ್ರ ಪ್ರದೇಶದಿಂದ ಛತ್ತೀಸ್‌ಗಢ, ಒಡಿಶಾ, ಮಹಾರಾಷ್ಟ್ರ ಮತ್ತು ಜಾರ್ಖಂಡ್‌ವರೆಗೆ ಹರಡಿಕೊಂಡಿದ್ದವು. ಆದರೆ ಕಳೆದ ದಶಕದಲ್ಲಿ ನಕ್ಸಲ್ ಪ್ರಭಾವಿತ ಜಿಲ್ಲೆಗಳ ಸಂಖ್ಯೆ ಭಾರೀ ಪ್ರಮಾಣದಲ್ಲಿ ಕುಸಿದಿದೆ. 2018ರಲ್ಲಿ 126



ಜಿಲ್ಲೆಗಳಿದ್ದರೆ, 2025ರ ಅಂತ್ಯದ ವೇಳೆಗೆ ಅದು ಕೇವಲ ಎಂಟು ಜಿಲ್ಲೆಗಳ ಮಟ್ಟಕ್ಕೆ ಇಳಿದಿದೆ. "ಅತ್ಯಂತ ಪ್ರಭಾವಿತ" ಜಿಲ್ಲೆಗಳ ಸಂಖ್ಯೆ ಸಹ ಮೂರುಕ್ಕೆ ಇಳಿದಿದೆ. ಈ ಬದಲಾವಣೆಯ ಹಿಂದೆ ಕೇವಲ ಸೈನಿಕ ಕಾರ್ಯಾಚರಣೆಗಳೇ ಕಾರಣವಾಗಿಲ್ಲ. ಕೇಂದ್ರ ಸರ್ಕಾರ ಭದ್ರತೆ ಮತ್ತು ಅಭಿವೃದ್ಧಿಯನ್ನು ಒಂದೇ ವೇಳೆ ಜೋಡಿಸಿ ಕಾರ್ಯತಂತ್ರ ರೂಪಿಸಿತು. ಸಾವಿರಾರು ಕಿಲೋಮೀಟರ್ ರಸ್ತೆ, ನೂರಾರು ಪೊಲೀಸ್ ಶಿಬಿರಗಳು, ಮೊಬೈಲ್ ಟವರ್‌ಗಳು, ಬ್ಯಾಂಕಿಂಗ್ ಸೌಲಭ್ಯಗಳು, ಶಾಲೆಗಳು ಮತ್ತು ಕೌಶಲ್ಯಾಭಿವೃದ್ಧಿ ಕೇಂದ್ರಗಳನ್ನು ನಕ್ಸಲ್ ಪೀಡಿತ ಪ್ರದೇಶಗಳಲ್ಲಿ ಸ್ಥಾಪಿಸಲಾಯಿತು. 2019ರಿಂದ 2025ರ ಅವಧಿಯಲ್ಲಿ 320 ಭದ್ರತಾ ಶಿಬಿರಗಳು ಹಾಗೂ 68 ರಾತ್ರಿ ಹೆಲಿಪ್ಯಾಡ್‌ಗಳನ್ನು ನಿರ್ಮಿಸಲಾಗಿದೆ. ನಕ್ಸಲಿಸಂ ಬಡತನದಿಂದ ಹುಟ್ಟಿಕೊಂಡಿತೇ ಅಥವಾ ನಕ್ಸಲಿಸಂ ಇರುವುದರಿಂದಲೇ ಬಡತನ ಹೆಚ್ಚಿತೇ ಎಂಬ ಪ್ರಶ್ನೆಯೂ ಈಗ ಮತ್ತೆ ಚರ್ಚೆಗೆ ಬಂದಿದೆ. ನಕ್ಸಲ್ ಪ್ರಭಾವಿತ ಪ್ರದೇಶಗಳಿಗಿಂತಲೂ ಹೆಚ್ಚು ಬಡತನವಿದ್ದ ಹಲವು ಭಾಗಗಳಲ್ಲಿ ನಕ್ಸಲಿಸಂ ಬೇರುಬಿಟ್ಟಿಲ್ಲ. ಆದರೆ ಬಂದೂಕಿನ ನೆರಳಲ್ಲಿ ಸರ್ಕಾರದ ವ್ಯವಸ್ಥೆ, ಶಾಲೆ, ಆಸ್ಪತ್ರೆ, ರಸ್ತೆ ಮತ್ತು ಬ್ಯಾಂಕುಗಳು ತಲುಪದ ಪ್ರದೇಶಗಳಲ್ಲಿ ಅಭಿವೃದ್ಧಿ ಸಂಪೂರ್ಣ ನಿಂತುಹೋಯಿತು. ಹೀಗಾಗಿ "ನಕ್ಸಲಿಸಂ ಬಡತನವನ್ನು ಹೆಚ್ಚಿಸಿತು" ಎಂಬ ವಾದಕ್ಕೂ ಈಗ ಹೆಚ್ಚಿನ ಬೆಂಬಲ ದೊರಕುತ್ತಿದೆ. ಮಾವೋವಾದಿ ಹಿಂಸಾಚಾರವು 2010ರಿಗಿಂತ 2025ರಲ್ಲಿ 80 ಶೇಕಡಾ ಕುಸಿದಿದೆ. ನಾಗರಿಕರು ಮತ್ತು ಭದ್ರತಾ ಸಿಬ್ಬಂದಿಯ ಸಾವಿನ ಪ್ರಮಾಣವೂ 90 ಶೇಕಡಾ ಕಡಿಮೆಯಾಗಿದೆ. 2025ರಲ್ಲಿ ಮಾತ್ರ 2,337 ನಕ್ಸಲರು ಶರಣಾಗಿದ್ದು, 1,022 ಮಂದಿಯನ್ನು ಬಂಧಿಸಲಾಗಿದೆ ಎಂದರು.

## ಬಸವಣ್ಣನವರ ಆಶಯದಂತೆ ನಮ್ಮ ಸರ್ಕಾರ ನಡೆಯುತ್ತಿದೆ



ದಾವಣಗೆರೆ

ಈ ಉಪ ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿ ಸಮರ್ಥ್ ಶಾಮನೂರು ಗೆದ್ದರೆ ನನಗೆ ಶಕ್ತಿ ಬರುತ್ತದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಇಂದು ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ನಾಗನೂರು, ಶರಮಗೊಂಡನಳ್ಳಿ, ತುರ್ಚಘಟ್ಟ, ಹದಡಿ ಮುಂತಾದ ಗ್ರಾಮದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಮರ್ಥ್ ಶಾಮನೂರು ಪರ ರೋಡ್ ಶೋ ನಡೆಸಿ ಮತಯಾಚಿಸಿ ಮಾತನಾಡಿದರು.

ಕಾಂಗ್ರೆಸ್ ನಲ್ಲಿ ಕುಟುಂಬ ರಾಜಕಾರಣ ಎಂದು ಬಿಜೆಪಿ ನಾಯಕರು ಆರೋಪಿಸುತ್ತಿದ್ದಾರೆ. ಆದರೆ ಬಿ.ಎಸ್. ಯಡಿಯೂರಪ್ಪ, ಬಸವರಾಜ ಬೊಮ್ಮಾಯಿ, ಕುಮಾರಸ್ವಾಮಿ, ದೇವೇಗೌಡ ಅವರ ಮಕ್ಕಳು, ಮೊಮ್ಮಕ್ಕಳು ಚುನಾವಣೆಗೆ ಸ್ಪರ್ಧಿಸುತ್ತಿಲ್ಲವೇ ? ಅದು ಕುಟುಂಬ ರಾಜಕಾರಣ ಅಲ್ಲವೇ ಎಂದು ಪ್ರಶ್ನಿಸಿದರು.

ಸಮರ್ಥ್ ಅತ್ಯಂತ ವಿದ್ಯಾವಂತ ಮತ್ತು ರಾಜಕಾರಣದ ಎಲ್ಲ ಅರ್ಹತೆಗಳಿರುವ ಸಮರ್ಥ ಅಭ್ಯರ್ಥಿ. ಇವರು ಗೆದ್ದು ನಿಮ್ಮ ಪರವಾಗಿ ಕೆಲಸ ಮಾಡುತ್ತಾರೆ. ಎಲ್ಲಾ ಜನಪರ ಗುಣಗಳು ಸಮರ್ಥ್ ಅವರಲ್ಲಿದೆ ಎಂದರು.

ದಾವಣಗೆರೆಗೆ ಶಾಮನೂರು ಕೊಡುಗೆ ಸಾಕಷ್ಟಿದೆ. ದಾವಣಗೆರೆ ದಕ್ಷಿಣದಲ್ಲಿ ಸಮರ್ಥ್ ಗೆಲ್ಲುತ್ತಾರೆ. ಗ್ಯಾರಂಟಿ ಯೋಜನೆಗಳಿಗೆ 1.43 ಲಕ್ಷ ಕೋಟಿ ರೂ. ಹಣ ಖರ್ಚು ಮಾಡಿದ್ದೇವೆ. ಸಮರ್ಥ ಶಾಮನೂರು ಗೆದ್ದರೆ ನನಗೆ ಶಕ್ತಿ ಬರುತ್ತದೆ ಎಂದರು.

ದಾವಣಗೆರೆಗೆ ಮಾತ್ರವೇ 538 ಕೋಟಿ ರೂಪಾಯಿಗಳನ್ನು ಗ್ಯಾರಂಟಿ ಯೋಜನೆಗಳಿಗಾಗಿ ಖರ್ಚು ಮಾಡಿದ್ದೇವೆ. ಮಧ್ಯವರ್ತಿಗಳ ಹಾವಳಿ ಇಲ್ಲದೇ ಅಷ್ಟೂ ಹಣ ದಾವಣಗೆರೆ ಜನರ ಬದುಕಿಗೆ ಜಮೆ ಆಗಿದೆ. ಈ ಹಣ ಕೊಟ್ಟಿದ್ದನ್ನು ಬಿಜೆಪಿಯವರು ವಿರೋಧಿಸಿದ್ದರು. ಜನರ ಹಣವನ್ನು ಜನರಿಗೆ ವಾಪಾಸ್ ಕೊಡುವುದು ತಪ್ಪಾ ಎಂದರು.

ಬಿಜೆಪಿ 2018 ರಲ್ಲಿ ತಮ್ಮ ಪ್ರಣಾಳಿಕೆಯಲ್ಲಿ 600 ಭರವಸೆಗಳನ್ನು ನೀಡಿ ಇದರಲ್ಲಿ ಹತ್ತು ಪರ್ಸೆಂಟ್ ಕೂಡ ಭರವಸೆ ಈಡೇರಿಸಲಿಲ್ಲ. ಆದರೆ 2013 ರಲ್ಲಿ ನಾವು ನಮ್ಮ ಪ್ರಣಾಳಿಕೆಯಲ್ಲಿ 165 ಭರವಸೆ ನೀಡಿ ಅದರಲ್ಲಿ 158 ಈಡೇರಿಸಿ ನುಡಿದಂತೆ ನಡೆದಿದ್ದೇವೆ. 2023. ರಲ್ಲೂ ನಾವು ಐದು ಗ್ಯಾರಂಟಿಗಳನ್ನು ಘೋಷಿಸಿ ಐದಕ್ಕೆ ಐದೂ ಜಾರಿ ಮಾಡಿದ್ದೇವೆ ಎಂದರು.

ಬಿಜೆಪಿ ಅಧಿಕಾರದಲ್ಲಿದ್ದಾಗ ಜನರ ಕೆಲಸ ಮಾಡಲಿಲ್ಲ. ಕಾಂಗ್ರೆಸ್ ಸರ್ವ ಜಾತಿ ಜನಾಂಗಗಳನ್ನು ಒಟ್ಟಿಗೇ ಕರೆದೊಯ್ಯುತ್ತದೆ. ನಮ್ಮ ಗ್ಯಾರಂಟಿಗಳ ಫಲವನ್ನು ಎಲ್ಲಾ ಪಕ್ಷದವರೂ, ಎಲ್ಲಾ ಜಾತಿ, ಎಲ್ಲಾ ಧರ್ಮದವರೂ ಪಡೆಯುತ್ತಿದ್ದಾರೆ. ಆದ್ದರಿಂದ ನಮ್ಮದು "ಸರ್ವ ಜನಾಂಗದ ಶಾಂತಿಯ ತೋಟ" ಎಂದರು.

ಕಾಂಗ್ರೆಸ್ ಮಹಾತ್ಮಗಾಂಧಿ, ಅಂಬೇಡ್ಕರ್, ಬಸವಣ್ಣನವರ ಆಶಯದ ಹಾದಿಯಲ್ಲಿ ನಡೆದರೆ, ಬಿಜೆಪಿ ಗೋಡ್ಸೆ ಮಾತಿನಂತೆ ನಡೆಯುತ್ತದೆ ಎಂದರು.

ಆದ್ದರಿಂದ ದಲಿತರು, ಹಿಂದುಳಿದವರು, ಶ್ರಮಿಕರು, ಮಹಿಳೆಯರು ಎಲ್ಲಾ ಧರ್ಮದವರ ಪಕ್ಷ. ಆದ್ದರಿಂದ ಎಲ್ಲರಿಗೂ ಆರ್ಥಿಕವಾಗಿ ಶಕ್ತಿ ತುಂಬುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ ಎಂದರು.

ಬಿಜೆಪಿಯವರು ನನ್ನನ್ನು ಸಾಲದ ರಾಮಯ್ಯ ಅಂತಾರೆ. ಈ ಚುನಾವಣೆಯಲ್ಲಿ ಬಿಜೆಪಿ ಸೋಲಿಸಿ ನಾನು ಅನ್ನದ ರಾಮಯ್ಯ ಎನ್ನುವುದನ್ನು ತೋರಿಸಿ ಎಂದರು.

ನಮ್ಮ ಮೂಲ ಉದ್ದೇಶ ತಳ ಸಮುದಾಯದ ಅಭಿವೃದ್ದಿ. ಬಸವಣ್ಣ ಅವರ ಪರಿಕಲ್ಪನೆಯಲ್ಲಿ ನಾವು ಸರ್ಕಾರ ನಡೆಸುತ್ತಿದ್ದೇವೆ. ಮಧ್ಯವರ್ತಿಗಳ ಕಾಟ ಇಲ್ಲದೆ ಬಡವರ ಖಾತೆಗೆ ಹಣ ಹಾಕುತ್ತಿದ್ದೇವೆ ಎಂದರು.

ಗ್ಯಾರಂಟಿಯಿಂದ ಖಜಾನೆ ಖಾಲಿ ಎಂಬ ಬಿಜೆಪಿ ಆರೋಪ ಕುರಿತು ಪ್ರತಿಕ್ರಿಯಿಸಿದ ಸಿಎಂ ಸಿದ್ದರಾಮಯ್ಯ ನಾವು 1.40 ಕೋಟಿ ರೂ ಸಾಲ ಮಾಡಿದ್ದೇವೆ. ಬಿಜೆಪಿಯವರು 5.30 ಲಕ್ಷ ಕೋಟಿಗೂ ಹೆಚ್ಚು ಸಾಲ ಮಾಡಿದ್ದಾರೆ ಎಂದು ವಿವರಿಸಿದರು.

# ಸಿಇಪಿಟಿಯ ವಿಶೇಷ ಕೋರ್ಸ್‌ನಲ್ಲಿ ವಾಸ್ತುಶಿಲ್ಪಿಗಳ ವೃತ್ತಿಗೆ ಹೊಸ ದಿಕ್ಕು

ಬೆಂಗಳೂರು

ನಗರಗಳ ವೇಗವಾದ ಬೆಳವಣಿಗೆ, ಪರಿಸರ ಸಮಸ್ಯೆಗಳು ಹಾಗೂ ಸಾಂಸ್ಕೃತಿಕ ಪರಂಪರೆಯ ರಕ್ಷಣೆಯ ಅಗತ್ಯತೆ ಹೆಚ್ಚುತ್ತಿರುವ ಸಂದರ್ಭದಲ್ಲಿ, ಇಂದಿನ ವಾಸ್ತುಶಿಲ್ಪಿಗಳಿಗೆ ಕೇವಲ ಕಟ್ಟಡ ವಿನ್ಯಾಸ ತಿಳಿದಿದ್ದರೆ ಸಾಲದು. ಭೂಪ್ರದೇಶ ನಿರ್ವಹಣೆ, ಪರಂಪರೆಯ ಸಂರಕ್ಷಣೆ ಮತ್ತು ಪರಿಸರ ಬದಲಾವಣೆಗಳಿಗೆ ಹೊಂದಿಕೊಳ್ಳುವ ಕೌಶಲ್ಯಗಳೂ ಅಗತ್ಯವಾಗಿವೆ.

ಈ ಹಿನ್ನೆಲೆಯಲ್ಲಿ ಸಿಇಪಿಟಿ ವಿಶ್ವವಿದ್ಯಾಲಯನ ವಾಸ್ತುಶಿಲ್ಪ ವಿಭಾಗವು ವಿದ್ಯಾರ್ಥಿಗಳಿಗಾಗಿ ಎರಡು ವಿಶೇಷ ಸ್ನಾತಕೋತ್ತರ ಕಾರ್ಯಕ್ರಮಗಳನ್ನು ಪರಿಚಯಿಸಿದೆ. ಮಾಸ್ಟರ್ಸ್ ಇನ್ ಕನ್ಸರ್ವೇಷನ್ ಅಂಡ್ ರೀಜನರೇಷನ್ ಮತ್ತು ಮಾಸ್ಟರ್ಸ್ ಇನ್ ಲ್ಯಾಂಡ್‌ಸ್ಕೇಪ್ ಆರ್ಕಿಟೆಕ್ಚರ್ ಎಂಬ ಈ ಕಾರ್ಯಕ್ರಮಗಳು ವಾಸ್ತುಶಿಲ್ಪಿಗಳ ವೃತ್ತಿ ವ್ಯಾಪ್ತಿಯನ್ನು ವಿಸ್ತರಿಸುವುದರ ಜೊತೆಗೆ ಹೊಸ ತಲೆಮಾರಿನ ನಗರ ಹಾಗೂ ಪರಿಸರ ಸವಾಲುಗಳಿಗೆ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸುತ್ತವೆ.

ಸಿಇಪಿಟಿ ವಿಶ್ವವಿದ್ಯಾಲಯಯ ಮಾಸ್ಟರ್ಸ್ ಇನ್ ಕನ್ಸರ್ವೇಷನ್ ಅಂಡ್ ರೀಜನರೇಷನ್ ಕಾರ್ಯಕ್ರಮವು ಸಂರಕ್ಷಣೆಯನ್ನು ಕೇವಲ ಹಳೆಯ ಕಟ್ಟಡಗಳನ್ನು ಉಳಿಸುವ ಕಾರ್ಯವೆಂದು ಪರಿಗಣಿಸದೆ, ಅದನ್ನು ವಿನ್ಯಾಸ ಮತ್ತು ಪರಿಸರದ ಭಾಗವಾಗಿ ನೋಡುತ್ತದೆ. ಈ ಕೋರ್ಸ್‌ನಲ್ಲಿ ಐತಿಹಾಸಿಕ ಕಟ್ಟಡಗಳು ಮತ್ತು ಪಾರಂಪರಿಕ ಪ್ರದೇಶಗಳನ್ನು ಹೇಗೆ ಸೃಜನಶೀಲವಾಗಿ ಪುನರುಜ್ಜೀವನಗೊಳಿಸಬಹುದು, ಹೊಸ ನಗರಾಭಿವೃದ್ಧಿಯ ಒತ್ತಡಗಳ ನಡುವೆಯೂ ಅವುಗಳನ್ನು ಹೇಗೆ ಉಳಿಸಬಹುದು ಎಂಬುದನ್ನು ಕಲಿಸಲಾಗುತ್ತದೆ. ಇತಿಹಾಸ, ತಂತ್ರಜ್ಞಾನ, ವಾಸ್ತುಶಿಲ್ಪ ಮತ್ತು ನಗರ ವಿನ್ಯಾಸದಲ್ಲಿ ಆಸಕ್ತಿ ಇರುವ ವಿದ್ಯಾರ್ಥಿಗಳಿಗೆ ಈ ಕೋರ್ಸ್ ಸೂಕ್ತವಾಗಿದೆ. ಸಂರಕ್ಷಣೆ ಮತ್ತು ಪುನರ್ ನಿರ್ಮಾಣ ಕ್ಷೇತ್ರದಲ್ಲಿ ವೃತ್ತಿ ರೂಪಿಸಬಯಸುವವರಿಗೆ ಇದು ದೊಡ್ಡ ಅವಕಾಶವಾಗಿದೆ. ನಗರಗಳು ಇಂದು ಪಾರಂಪರಿಕ ತಾಣಗಳ ಅಭಿವೃದ್ಧಿಗೆ ಹೆಚ್ಚಿನ ಮಹತ್ವ ನೀಡುತ್ತಿರುವುದರಿಂದ, ಇಂತಹ ಕ್ಷೇತ್ರಗಳಲ್ಲಿ ಪರಿಣತಿ ಹೊಂದಿರುವ ವೃತ್ತಿಪರರಿಗೆ ಬೇಡಿಕೆಯೂ ಹೆಚ್ಚುತ್ತಿದೆ.

# ದೊಡ್ಡಬಳ್ಳಾಪುರದಲ್ಲಿ ರಾಯಲ್ ಓಕ್ ಫರ್ನಿಚರ್ ನೂತನ ಮಳಿಗೆ

ಬೆಂಗಳೂರು

ಭಾರತದ ಅಗ್ರ ಪೀಠೋಪಕರಣ ಬ್ರ್ಯಾಂಡ್ ಆಗಿರುವ ರಾಯಲ್ ಓಕ್ ಫರ್ನಿಚರ್, ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದಲ್ಲಿ ನೂತನ ಮಳಿಗೆಗೆ ಚಾಲನೆ ನೀಡಿದೆ. ರಾಯಲ್ ಓಕ್ ಇನ್‌ಕಾರ್ಪೊರೇಷನ್ ಪ್ರೈವೇಟ್ ಲಿಮಿಟೆಡ್‌ನ ಅಧ್ಯಕ್ಷ ವಿಜಯ್ ಸುಬ್ರಮಣಿಯಂ, ವ್ಯವಸ್ಥಾಪಕ ನಿರ್ದೇಶಕ ಮಥನ್ ಸುಬ್ರಮಣಿಯಂ ಮತ್ತು ಫ್ರಾಂಚೈಸಿ ಪಾಲುದಾರ ಶ್ರೀ ದೀಪಕ್ ಶಿವಕುಮಾರ್ ಸೇರಿದಂತೆ ಗಣ್ಯರ ಸಮ್ಮುಖದಲ್ಲಿ ನೂತನ ಮಳಿಗೆಗೆ ಚಾಲನೆ ನೀಡಲಾಯಿತು.

12000 ಚದರ ಅಡಿ ವಿಸ್ತೀರ್ಣದಲ್ಲಿರುವ ಈ ಮಳಿಗೆಯು ಸ್ಥಳೀಯ ಗ್ರಾಹಕರಿಗೆ ವಾಸದ ಕೋಣೆಗಳು, ಮಲಗುವ ಕೋಣೆಗಳಿಂದ ಹಿಡಿದು ಗೃಹಾಲಂಕಾರಕ್ಕೆ ಅಗತ್ಯವಾದ ಅಂತಾರಾಷ್ಟ್ರೀಯ ಗುಣಮಟ್ಟದ ವ್ಯಾಪಕ ಶ್ರೇಣಿಯ ಪೀಠೋಪಕರಣಗಳನ್ನು ಕೈಗೆಟಕುವ ಬೆಲೆಯಲ್ಲಿ ಒದಗಿಸಲಿದೆ.

"ಗ್ರಾಮೀಣ ಭಾಗದ ಗ್ರಾಹಕರನ್ನು ತಲುಪುವ ಸಂಸ್ಥೆಯ ಧ್ಯೇಯದ ಪ್ರತೀಕವಾಗಿ ಈ ಮಳಿಗೆ



ಸಿದ್ಧಗೊಂಡಿದೆ. ಈ ಮೂಲಕ ಕರ್ನಾಟಕದಲ್ಲಿ ನಮ್ಮ ರೀಟೇಲ್ ಅಸ್ತಿತ್ವವನ್ನು ಇನ್ನಷ್ಟು ಬಲವರ್ಧನೆಗೊಳಿಸಿದ್ದೇವೆ.

ಈ ಹೆಜ್ಜೆ ಸ್ಥಳೀಯ ಗ್ರಾಹಕರಿಗೆ ಅಂತರರಾಷ್ಟ್ರೀಯ ಗುಣಮಟ್ಟದ ಪೀಠೋಪಕರಣಗಳನ್ನು ಕೈಗೆಟುಕುವ ಬೆಲೆಯಲ್ಲಿ ಒದಗಿಸುವ ಜತೆಗೆ, ಸ್ಥಳೀಯರಿಗೆ ಉದ್ಯೋಗಾವಕಾಶವನ್ನು ನೀಡಲಿದೆ" ಎಂದು ವಿಜಯ್ ಸುಬ್ರಮಣಿಯಂ ಹೇಳಿದರು. ಮಳಿಗೆ ವಿಳಾಸ: ಎಸ್‌ಎಲ್‌ವಿ ಕಾಂಪ್ಲೆಕ್ಸ್, ಕೊಡಿಗೆಹಳ್ಳಿ ಪಂಚಾಯತ್, ಆರ್‌ಎಂಸಿ ಮಾರುಕಟ್ಟೆ ಹತ್ತಿರ, ದೊಡ್ಡಬಳ್ಳಾಪುರ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ. ದೂರವಾಣಿ: 76250 34585



ಬೆಂಗಳೂರು: ಭಾರತೀಯ ಜನತಾ ಪಕ್ಷದ ದೇಶಭಕ್ತಿ ಮತ್ತು ತತ್ವ ಸಿಧ್ದಾಂತಗಳು ಹಾಗೂ ಶಾಸಕ ಎಸ್ ಮುನಿರಾಜು ರವರ ಅಭಿವೃದ್ಧಿ ಕಾರ್ಯಗಳನ್ನು ಮೆಚ್ಚಿ ಅವರ ಸಮ್ಮುಖದಲ್ಲಿ ಶಾಸಕರ ಕಛೇರಿಯಲ್ಲಿ ನಿಕಟಪೂರ್ವ ಬಿಬಿಎಂಪಿ ಸದಸ್ಯರಾದ ಭಾಗ್ಯಮ್ಮ ಕೃಷ್ಣಯ್ಯ ನವರ ನೇತೃತ್ವದಲ್ಲಿ ಹೆಗ್ಗನಹಳ್ಳಿ ವಾರ್ಡ್ನ ವಿವಿಧ ಪಕ್ಷಗಳ ಮುಖಂಡರುಗಳಾದ ಶಿವಣ್ಣ, ರೇವಣ್ಣ ಜಿ ಎ, ಮುನಿಯಪ್ಪ, ಕೆ ರೇವಣ್ಣ, ಕಿರಣ್ ಕುಮಾರ್, ಬಿ ವಿ ಮಂಜುನಾಥ್, ಮಲ್ಲೇಶಪ್ಪ ಧಾರವಾಡ, ಸದಾನಂದ ಯು, ರಾಘವೇಂದ್ರ ಎಂ, ಲಕ್ಷ್ಮಣ್ ವಿ,ಹಾಗೂ ಅನೇಕ ಮುಖಂಡರು ಪಕ್ಷ ತೊರೆದು ಸೇರ್ಪಡೆಯಾದರು.ಈ ಸಂಧರ್ಭದಲ್ಲಿ ಶಿವಲಿಂಗಯ್ಯ,ರಾಜು,ನಾಗೇಶ್ ಶೆಟ್ಟಿ ,ರಂಗನಾಥ್, ರಾಜಣ್ಣ,ಮತ್ತಿತರು ಇದ್ದರು.

